**ದಿನಾಂಕ 19.03.2025 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಂದುವರೆದ ಪಾಟೀಸವಾಲುಃ ಶ್ರೀ ವಿ.ಎಸ್.ಆರ್. ವಕೀಲರಿಂದಃ**

1. ಎಂ.ಆರ್ 5/2016-17 ರಂತೆ ಮಧುಗಿರಿ ಎ.ಸಿ ನ್ಯಾಯಾಲಯದಲ್ಲಿ ಆರ್.ಆರ್.ಟಿ 95/2019-20 ರಂತೆ ನೀವು ಅಪೀಲು ಹೋಗಿದ್ದೀರಾ ಎಂದರೆ ಸರಿ. ಸದರಿ ನ್ಯಾಯಾಲಯದಲ್ಲಿ ಆದೇಶವು ನಮ್ಮ ಪರವಾಗಿ ಆಗಿದೆ ಎಂದರೆ ಸರಿ, ಅದರ ವಿರುದ್ಧ ಪ್ರತಿವಾದಿಯು ಜಿಲ್ಲಾ ನ್ಯಾಯಾಲಯದಲ್ಲಿ ಆರ್.ಪಿ. 139/2021 ರಂತೆ ಅಪೀಲು ಹೋಗಿದ್ದರು ಎಂದರೆ ಸರಿ, ಸಾಕ್ಷಿ ಮುಂದುವರೆದು ಸದರಿ ಕೇಸು ನಮ್ಮ ಪರವಾಗಿದ್ದು, ಡಿ.ಸಿ ನ್ಯಾಯಾಲಯದಲ್ಲಿ ಕೇಸು ವಜಾ ಆಗಿದೆ ಎಂದು ನುಡಿಯುತ್ತಾರೆ. ಡಿ.ಸಿ ನ್ಯಾಯಾಲಯದಲ್ಲಿ ಸಿವಿಲ್ ನ್ಯಾಯಾಲಯದಲ್ಲಿ ಪರಿಹಾರ ಪಡೆಯಲು ಆದೇಶ ಮಾಡಲಾಗಿತ್ತು ಎಂದರೆ ಸರಿಯಲ್ಲ. ಸಾಕ್ಷಿಗೆ ಡಿ.ಸಿ ಆದೇಶವನ್ನು ನೀಡಿ ಅದರಲ್ಲಿ ಸಿವಿಲ್ ನ್ಯಾಯಾಲಯದಲ್ಲಿ ಪರಿಹಾರ ಪಡೆಯಲು ಅದೇಶಿಸಲಾಗಿದೆ ಎಂದರೆ ಸಾಕ್ಷಿಯು ನಮ್ಮ ಪರವಾಗಿಯೂ ಸಹ ಸದರಿ ಆದೇಶದಲ್ಲಿ ಬರೆಯಲಾಗಿದೆ ಎಂದು ನುಡಿಯುತ್ತಾರೆ. ಸಾಕ್ಷಿ ಮುಂದುವರೆದು 50/3 ಬಿ ರಲ್ಲಿ ಪ್ರತಿವಾದಿಗಳಿಗೆ ಯಾವುದೇ ಹಕ್ಕು ಇಲ್ಲ ಎಂದು ಬರೆಯಲಾಗಿದೆ ಎಂದು ನುಡಿಯುತ್ತಾರೆ. ನೀವು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ದಾವಾ ಜಮೀನನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಕಂಪ್ಯೂಟರ್ ಗೊಳಿಸಿ ದಾಖಲಿಸಿ ಪ್ರಿಂಟ್ ತೆಗೆಯಲಾಯಿತು)

**ಓದಿ ಹೇಳಿ ಕೇಳಿ ಸರಿ ಇದೆ,**

**ಹಿರಿಯ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ, ಶಿರಾ.**